ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	794 (1000)
ಸದಸ್ಯರ ಹೆಸರು	:	ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	:	10–03–2021
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಬೆಂಗಳೂರಿನ ನೈಸ್ ರಸ್ತೆಯಲ್ಲಿ ಫಾಸ್ಟ್ ಟ್ಯಾಗ್ ಅಳವಡಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
(ಆ)	ಹಾಲಿ ನೈಸ್ ರಸ್ತೆಯಲ್ಲಿ ಪ್ರತಿ ದಿನ ಒಂದು ಲಕ್ಷದಷ್ಟು ವಾಹನಗಳು ಸಂಚರಿಸುತ್ತಿದ್ದು, ಕೋವಿಡ್–19 ಸಂದರ್ಭದಲ್ಲಿ ಹಣದ ವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಂಗಳೂರಿನ ನೈಸ್ ರಸ್ತೆಯಲ್ಲಿ ವಾಹನಗಳು ಸಂಚರಿಸುತ್ತಿದ್ದು, ಒಂದು ಲಕ್ಷದಷ್ಟು ವಾಹನಗಳು ಸಂಚರಿಸುತ್ತಿರುವ ಬಗ್ಗೆ ನಿಖರವಾದ ಮಾಹಿತಿ ಇರುವುದಿಲ್ಲ. ಹಾಗೂ ಕೋವಿಡ್–19 ಸಂದರ್ಭದಲ್ಲಿ ಹಣದ ವ್ಯವಹಾರ ನಡೆಯುತ್ತಿರುವ ಬಗ್ಗೆ ಈ ಇಲಾಖೆಗೆ ಯಾವುದೇ ದೂರು ಬಂದಿರುವುದಿಲ್ಲ.
(ಇ)	ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಫಾಸ್ಟ್ ಟ್ಯಾಗ್ ಕಡ್ಡಾಯಗೊಳಿಸಿದ್ದು, ನೈಸ್ ಫಾಸ್ಟ್ ಟ್ಯಾಗ್ ವ್ಯವಸ್ಥೆಯನ್ನು ಜಾರಿಗೊಳಿಸಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?	ಸರ್ಕಾರ ಮತ್ತು ನೈಸ್ ಸಂಸ್ಥೆಯೊಂದಿಗೆ ದಿನಾಂಕ 03.04.1997ರ ಕ್ರಿಯಾ ಒಪ್ಪಂದದಲ್ಲಿ ಯೋಜನಾ ಪ್ರವರ್ತಕ ಸಂಸ್ಥೆಯಾದ ಮೆ: ನೈಸ್ ಸಂಸ್ಥೆಯು ಕಾಂಕ್ರೀಟ್ ರಸ್ತೆ ಮಾಡಿದ ಮೇಲೆ ಟೋಲ್ ಶುಲ್ಕವನ್ನು ಸಂಗ್ರಹಿಸಲು ತಿಳಿಸಲಾಗಿರುತ್ತದೆ. ಆದರೆ ನೈಸ್ ಸಂಸ್ಥೆಯು ಕಾಂಕ್ರೀಟ್ ರಸ್ತೆ ಬದಲಿಗೆ ಡಾಂಬರ್ ರಸ್ತೆಯನ್ನು ನಿರ್ಮಿಸಿ ಕ್ರಿಯಾ ಒಪ್ಪಂದದ ಸೆಕ್ಷನ್ 6.6.3 ನ್ನು ಉಲ್ಲಂಘಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಕ್ರಿಯಾ ಒಪ್ಪಂದದ ಸೆಕ್ಷನ್ 16.2ರನ್ವಯ ಸರ್ಕಾರದಿಂದ ಡಿಫಾಲ್ಟ್ ನೋಟೀಸ್‌ನ್ನು ದಿನಾಂಕ 5–2–2016ರಂದು ನೈಸ್ ಸಂಸ್ಥೆಗೆ ನೀಡಲಾಗಿದೆ. ಆದರೆ ಸದರಿ ಡಿಫಾಲ್ಟ್ ನೋಟೀಸ್ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ. 12109–10/2016 ಅನ್ನು ದಾಖಲಿಸಿ ತಡೆಯಾಜ್ಞೆ ತಂದಿರುತ್ತಾರೆ. ಪ್ರಕರಣ ಮಾನ್ಯ ನ್ಯಾಯಾಲಯದಲ್ಲಿ ಬಾಕಿ ಇದ್ದು, ಪ್ರಕರಣ ಇತ್ಯರ್ಥವಾದ ನಂತರ ಈ ಬಗ್ಗೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಸಂಖ್ಯೆ: ಲೋಇ 195 ಸಿಆರ್ಎಂ 2019

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯ ಮಂತ್ರಿಗಳು ಹಾಗೂ
ಲೋಕೋಪಯೋಗಿ ಸಚಿವರು